**ದಿನಾಂಕಃ 28.04.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಸಾಕ್ಷಿಗೆ ತೆಲಗು ಭಾಷೆಯನ್ನು ಹೊರತುಪಡಿಸಿ ಬೇರೆ ಭಾಷೆ ಬರುವುದಿಲ್ಲ ಎಂದು ತಿಳಿಸಿದ ಮೇರೆಗೆ ಶ್ರೀಮತಿ ಜಿ.ವಿ ವಕೀಲರನ್ನು ತರ್ಜುಮೆಗಾರರನ್ನಾಗಿ ನೇಮಿಸಿಕೊಳ್ಳಲು ಅನುಮತಿ ನೀಡಲಾಯಿತು.

**ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಎಪಿ-02-ಟಿಬಿ-0273 ಸಂಖ್ಯೆಯ ಆಟೋ ಚಾಲಕನ ಪರಿಚಯ ನನಗೆ ಇಲ್ಲ. ಸದರಿ ಆಟೋಗೆ ಸೇರಿದ ದಾಖಲಾತಿಗಳನ್ನು ಮತ್ತು ಪಾಲಿಸಿಯ ಪ್ರತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಆ ದಿನ ನಾನು ಆತ್ಮಕೂರಿನಿಂದ ಮುತ್ತಾಲ ಕಡೆಗೆ ಹೋಗುತ್ತಿದ್ದೆನು. ಆ ದಿನ ಆಟೋದಲ್ಲಿ ನನ್ನ ಜೊತೆ ಇಬ್ಬರು ಪ್ರಯಾಣಿಕರು ಇದ್ದರು. ಅಪಘಾತವಾದ ರಸ್ತೆ ನೇರವಾದ ರಸ್ತೆ ಎಂದರೆ ಸರಿ. ಆಪಾದಿತ ವಾಹನವನ್ನು ಅಪಘಾತಕ್ಕೂ ಪೂರ್ವದಲ್ಲಿ ನೋಡಿರುತ್ತೇನೆ. ನಾವು ಹೋಗುತ್ತಿದ್ದ ರಸ್ತೆಯ ಎಡಭಾಗದಲ್ಲಿ ಸ್ಥಳಾವಕಾಶ ಇರಲಿಲ್ಲ. ಎದುರಿನಿಂದ ಬರುತ್ತಿದ್ದ ಆಪಾತದಿ ವಾಹನ ಕಂಡುಬಂದರೂ ಸಹ ನಮ್ಮ ಆಟೋ ಎಡಭಾಗಕ್ಕೆ ಹೋಗಲು ಆಗಲಿಲ್ಲ. ಆಟೋ ಚಾಲಕನ ಅಜಾಗರೂಕತೆಯಿಂದ ಮತ್ತು ನಿರ್ಲಕ್ಷ್ಯತನದಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಅಪಘಾತದ ಬಗ್ಗೆ ದೂರನ್ನು ಯರು ನೀಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಐಎಂವಿ ವರದಿಯನ್ನು ತಂದು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿಯಲ್ಲ. ಅಪಘಾತವಾದ ನಂತರ ಪೊಲೀಸರು ಎರಡೂ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

ಅಪಘಾತವಾದ ನಂತರ ಅನಂತರಪುರದ ಆಸ್ಪತ್ರೆಗೆ ಹೋಗಿದ್ದು, ಸದರಿ ಆಸ್ಪತ್ರೆಯಲ್ಲಿ ಅಪಘಾತ ಹೇಗೆ ಸಂಭವಿಸಿತು ಎಂದು ಹೇಳಿರುತ್ತೇವೆ. ಆ ಬಗ್ಗೆ ಎಂ.ಎಲ್.ಸಿ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ನನಗೆ ಶಸ್ತ್ರ ಚಿಕಿತ್ಸೆ ಆಗಿಲ್ಲ ಎಂದರೆ ಸರಿಯಲ್ಲ.

ಚಿಕಿತ್ಸೆಗೆ ಮತ್ತು ಇತರೆ ಖರ್ಚುಗಳಿಗೆ ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಾವಗಿವೆ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಈಗಲೂ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಚಿಕಿತ್ಸೆಗೆ ತಗುಲಿದ ವೆಚ್ಚವನ್ನು ಸರ್ಕಾರದವರು ನೀಡಿರುತ್ತಾರೆ ಎಂದರೆ ಸರಿಯಲ್ಲ. ಮುಂದುವರೆದ ಚಿಕಿತ್ಸೆಗೆ ಮತ್ತು ಅದಕ್ಕೆ ಹೋಗಲು ಆಗುತ್ತಿದ್ದ ಖರ್ಚಿಗೆ ಆಗುತ್ತಿದ್ದ ವೆಚ್ಚಕ್ಕೆ ಸಂಬಂಧಿಸಿದಂತೆ ದಾಖಲಾತಿಯನ್ನು ಹಾಜರುಪಡಿಸಿಲ್ಲ.

ನನ್ನ ಕೆಲಸ ಮತ್ತು ಆದಾಯಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಹೇಳುವಷ್ಟು ಆದಾಯ ನನಗೆ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ದೈನಂದಿನ ಕೆಲಸಗಳನ್ನು ಮಾಡಿಕೊಳ್ಳಲು ಯಾವುದೇ ತೊಂದರೆ ಇಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**